# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಹುಸ್ಕೂರು ಗ್ರಾಮದ ರಸ್ತೆ ದುರಸ್ಥಿ/ಅಭಿವೃದ್ಧಿಗಾಗಿ 2012-13ನೇ ಸಾಲಿನಲ್ಲಿ ಅನುಮೋದನೆಗೊಂಡ ಕಾಮಗಾರಿಗೆ ಪ್ರಸ್ತುತ 2014-15ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:232:ಆರ್‌ಆರ್‌ಸಿ:2012, ದಿನಾಂಕ:16-3-2013.
2. ತಿದ್ದುಪಡಿ ಆದೇಶ ಸಂಖ್ಯೆ:ಗ್ರಾಅಪ:232/1:ಆರ್‌ಆರ್‌ಸಿ:2012, ದಿನಾಂಕ: 10-10-2014.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:232/2:ಆರ್‌ಆರ್‌ಸಿ:2012, ದಿನಾಂಕ:17-10-2014 (ಅನುದಾನ ಬಿಡುಗಡೆ).
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:232/3:ಆರ್‌ಆರ್‌ಸಿ:2012, ದಿನಾಂಕ:21-2-2015 (ಪರಿಷ್ಕೃತ ಅಂದಾಜು ಮೊತ್ತಕ್ಕೆ).
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ ಜಿ.ಪಂ ರವರ ಪತ್ರ ಸಂಖ್ಯೆ:ಬೆಂಜಿಪಂ/ಯೋವಿ(1)/ಸಿಆರ್24/2012-13, ದಿನಾಂಕ:24-2-2015.
6. ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ/21/ವೆಚ್ಚ-6/2013, ದಿನಾಂಕ:11-3-2015.

**ಪ್ರಸ್ತಾವನೆ:**

ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಎನ್.ಹೆಚ್-7 ರಿಂದ ಹುಸ್ಕೂರು ಗ್ರಾಮದವರೆಗೆ ರಸ್ತೆ ದುರಸ್ತಿ/ಅಭಿವೃದ್ಧಿ ಕಾಮಗಾರಿಯನ್ನು PPP ಮಾದರಿಯಲ್ಲಿ ರೂ.580.00ಲಕ್ಷ ಅಂದಾಜು ಮೊತ್ತದಲ್ಲಿ ಲೆಕ್ಕಶೀರ್ಷಿಕೆ-5054ರಡಿ ಕೈಗೊಳ್ಳಲು 2012-13ನೇ ಸಾಲಿನಲ್ಲಿ ಮೇಲೆ ಓದಲಾದ-1ರಲ್ಲಿನ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಸದರಿ ಆದೇಶದ ಪ್ರಕಾರ ಕಾಮಗಾರಿಯ ಒಟ್ಟು ಅಂದಾಜು ಮೊತ್ತ ರೂ.580.00ಲಕ್ಷಗಳ ಪೈಕಿ ರೂ.180.00ಲಕ್ಷಗಳನ್ನು Stake holders ಭರಿಸುವುದೆಂದು ಹಾಗೂ ಉಳಿದ ರೂ.400.00ಲಕ್ಷಗಳನ್ನು ಸರ್ಕಾರದಿಂದ ಭರಿಸುವುದೆಂದು ಸೂಚಿಸಲಾಗಿರುತ್ತದೆ.

ಸದರಿ ಕಾಮಗಾರಿಗೆ ಅನುದಾನ ಬಿಡುಗಡೆ ಸಂಬಂಧ ಆರ್ಥಿಕ ಇಲಾಖೆಗೆ ಪ್ರಸ್ತಾವಿಸಲಾಗಿ ಈ ಕಾಮಗಾರಿಯನ್ನು ಲೆಕ್ಕಶೀರ್ಷಿಕೆ-3054-04-337-1-12 (ಯೋಜನೆ) ರಡಿ ರೂ.200.00ಲಕ್ಷ ಬಿಡುಗಡೆ ಮಾಡಲು ಸಹಮತಿಸಿದ್ದರಿಂದ, ಅದರಂತೆ ಲೆಕ್ಕಶೀರ್ಷಿಕೆ-3054-04-337-1-12 (ಯೋಜನೆ) ರಡಿ ಕಾಮಗಾರಿ ಅನುಷ್ಠಾನಕ್ಕೆ ಮೇಲೆ ಓದಲಾದ-2ರಲ್ಲಿ ತಿದ್ದುಪಡಿ ಆದೇಶ ಹೊರಡಿಸಲಾಗಿದೆ.

ಸದರಿ ಕಾಮಗಾರಿಯ ಬಿಲ್ ಪಾವತಿಗಾಗಿ ಪ್ರಸ್ತುತ 2014-15ನೇ ಸಾಲಿನ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಲೆಕ್ಕಶೀರ್ಷಿಕೆ-3054-04-337-1-12-059(ಯೋಜನೆ)ರಡಿ ರೂ.200.00ಲಕ್ಷಗಳನ್ನು ಮೇಲೆ ಓದಲಾದ-3ರ ಆದೇಶದಲ್ಲಿ ಬಿಡುಗಡೆ ಮಾಡಿ, ಸದರಿ ಆದೇಶದಲ್ಲಿ Stake holders ರವರ ಪಾಲಿನ ಮೊತ್ತ ರೂ.60.00ಲಕ್ಷಗಳನ್ನು ವಿನಿಯೋಗಿಸುವಂತೆ ಜಿ.ಪಂ.ಗೆ ಸೂಚಿಸಲಾಗಿರುತ್ತದೆ.

ಸದರಿ ರಸ್ತೆ ಹಾದು ಹೋಗುವ ನಡುವೆ ಕೆರೆಯ ತೇವಾಂಶದಿಂದ ರಸ್ತೆಯು ಹಲವಾರು ಬಾರಿ ಹಾಳಾಗುತ್ತಿರುವ ಕಾರಣ ಈ ರಸ್ತೆಯ ಕಿ.ಮೀ.1.14 ರಿಂದ 1.57ಕಿ.ಮೀ. ವರೆಗೆ 600 ಮೀಟರ್‌ಗಳ ಉದ್ದಕ್ಕೆ ಡಾಂಬರೀಕರಣಕ್ಕೆ ಬದಲಾಗಿ ಸಿಮೆಂಟ್ ಕಾಂಕ್ರೀಟ್ ರಸ್ತೆ ನಿರ್ಮಾಣ

ಮಾಡಲು ಅನುಮೋದಿತ ಅಂದಾಜು ಮೊತ್ತ ರೂ.580.00ಲಕ್ಷಗಳ ಬದಲಾಗಿ ಪರಿಷ್ಕೃತ ಅಂದಾಜು ಮೊತ್ತ ರೂ.664.00ಲಕ್ಷಗಳಿಗೆ ಮೇಲೆ ಓದಲಾದ-4ರ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ ಕಾಮಗಾರಿಯನ್ನು PPP ಮಾದರಿಯಲ್ಲಿಯೇ ಅನುಷ್ಠಾನಗೊಳಿಸಿ ಪೂರ್ಣಗೊಳಿಸುವಂತೆ ಸೂಚಿಸಲಾಗಿರುತ್ತದೆ.

ಆನೇಕಲ್ ತಾಲ್ಲೂಕು, ಹುಸ್ಕೂರು ಗ್ರಾಮದ ಕಾಮಗಾರಿಯಲ್ಲಿ ಶೇ.10ರಷ್ಟು ಕೆಲಸಗಳಾದ ವಿದ್ಯುತ್ ಕಂಬ ಅಳವಡಿಕೆ, ಕೇಬಲ್ ಅಳವಡಿಕೆ ಮಾತ್ರ ಬಾಕಿ ಇರುವುದಾಗಿ ಉಳಿದಂತೆ ಎಲ್ಲಾ ಕೆಲಸಗಳು ಪೂರ್ಣಗೊಂಡಿದೆಯೆಂದು ಹಾಗೂ Stake holders ರವರು ರೂ.60.00ಲಕ್ಷಗಳನ್ನು ಚೆಕ್ ಮೂಲಕ ಜಿಲ್ಲಾ ಪಂಚಾಯತಿಗೆ ನೀಡಿರುವರೆಂದು, ಪರಿಷ್ಕೃತ ಅಂದಾಜು ಮೊತ್ತಕ್ಕೆ ಅನುಗುಣವಾಗಿ ಬಿಡುಗಡೆಗೆ ಬಾಕಿ ಇರುವ ರೂ.284.00ಲಕ್ಷಗಳನ್ನು ಕೂಡಲೇ ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ-5ರಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯತಿಯ ಪ್ರಸ್ತಾವನೆ ಕುರಿತಂತೆ ಆರ್ಥಿಕ ಇಲಾಖೆಯಿಂದ ಅನುದಾನ ಬಿಡುಗಡೆಗೆ ಕೋರಲಾಗಿ ಈ ಸಂಬಂಧ ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು ಎನ್.ಹೆಚ್-7 ರಿಂದ ಹುಸ್ಕೂರು ಗ್ರಾಮದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಲೆಕ್ಕಶೀರ್ಷಿಕೆ-3054-00-337-1-12-ಯೋಜನೆಯಡಿ ಲಭ್ಯವಿರುವ ಅನುದಾನದಿಂದ ರೂ.142.00ಲಕ್ಷಗಳನ್ನು ಬಿಡುಗಡೆ ಮಾಡಲು ಸಹಮತಿಸಿದೆಯೆಂದು ಮೇಲೆ ಓದಲಾದ-6ರಲ್ಲಿ ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

ಅದರಂತೆ ಪ್ರಸ್ತುತ 2014-15ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ-3054-04-337-1-12-422ರಡಿ ಲಭ್ಯವಿರುವ ಅನುದಾನದಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯತಿಗೆ ರೂ.142.00ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:232/4:ಆರ್ಆರ್‌ಸಿ:2012, ಬೆಂಗಳೂರು, ದಿನಾಂಕ:13-3-2015.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಬೆಂಗಳೂರು ನಗರ ಜಿಲ್ಲಾ ಪಂಚಾಯತಿಯಲ್ಲಿ ಕೈಗೊಂಡ ಆನೇಕಲ್ ತಾಲ್ಲೂಕು, ಎನ್.ಹೆಚ್-7 ರಿಂದ ಹುಸ್ಕೂರು ಗ್ರಾಮದವರೆಗೆ ರಸ್ತೆ ದುರಸ್ತಿ/ಅಭಿವೃದ್ಧಿ ಕಾಮಗಾರಿಯ ಬಿಲ್ ಪಾವತಿಗಾಗಿ ಪ್ರಸ್ತುತ 2014-15ನೇ ಸಾಲಿನ ಆರ್ಥಿಕ ವರ್ಷದಲ್ಲಿ ಲೆಕ್ಕಶೀರ್ಷಿಕೆ-**3054-04-337-1-12-422** (ಯೋಜನೆ)ರಡಿ ರೂ.**142.00**ಲಕ್ಷಗಳನ್ನು (ರೂಪಾಯಿಗಳು **ಒಂದು ನೂರ ನಲವತ್ತೆರಡು ಲಕ್ಷಗಳು** ಮಾತ್ರ) **ಬೆಂಗಳೂರು ನಗರ** ಜಿಲ್ಲಾ ಪಂಚಾಯತಿಗೆ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು:**

1. ಈ ಅನುದಾನವನ್ನು **2012-13**ನೇ ಸಾಲಿನಲ್ಲಿ ಹೆಚ್ಚುವರಿಯಾಗಿ ಆನೇಕಲ್ ತಾಲ್ಲೂಕು, ಎನ್.ಹೆಚ್-7 ರಿಂದ ಹುಸ್ಕೂರು ಗ್ರಾಮದವರೆಗೆ ರಸ್ತೆ ದುರಸ್ತಿ/ಅಭಿವೃದ್ಧಿ ಕಾಮಗಾರಿ ಬಿಲ್ ಪಾವತಿ ಹೊರತು ಬೇರೆ ಯಾವುದೇ ಕಾಮಗಾರಿಗಳಿಗೆ ಉಪಯೋಗಿಸತಕ್ಕದ್ದಲ್ಲ.
2. ಇದರೊಂದಿಗೆ Stake holders ರವರು ಬೆಂಗಳೂರು ನಗರ ಜಿಲ್ಲಾ ಪಂಚಾಯತಿಗೆ ಚೆಕ್ ಮೂಲಕ ನೀಡಿರುವ ರೂ.60.00ಲಕ್ಷಗಳನ್ನು ಸದರಿ ಕಾಮಗಾರಿಗೆ ವಿನಿಯೋಗಿಸತಕ್ಕದ್ದು.
3. ಬಳಕೆಯಾದ ಹಣ ಮತ್ತು ಕಾಮಗಾರಿ ಪ್ರಗತಿಯನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಗೆ ಒದಗಿಸತಕ್ಕದ್ದು.
4. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿಯು ಅನುಷ್ಠಾನಗೊಳಿಸಿರುವ ಹೆಚ್ಚುವರಿ ರಸ್ತೆ ಕಾಮಗಾರಿಗಳನ್ನು Worksoft works monitoring ಪದ್ಧತಿ

ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು. ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೆ ಅಳವಡಿಸತಕ್ಕದ್ದು.

5. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಅನುದಾನವನ್ನು ಮಾರ್ಗಪಲ್ಲಟವಾಗದಂತೆ ಅಥವಾ ವ್ಯಪಗತವಾಗದಂತೆ ನೋಡಿಕೊಳ್ಳತಕ್ಕದ್ದು.

6. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಹಣವನ್ನು ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗಧಿಗೊಳಿಸಿದ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ/21/ವೆಚ್ಚ-6/2013, ದಿನಾಂಕ:11-3-2015ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬೂವನಹಳ್ಳಿ ನಾಗರಾಜು) 13/3/16
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1)) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಆಡಿಟ್-2) ಕರ್ನಾಟಕ, ಬೆಂಗಳೂರು
4. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
14. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
15. ಅಧೀನ ಕಾರ್ಯದರ್ಶಿ, ವೆಚ್ಚ-6, ಜಿ.ಪಂ. ಆರ್ಥಿಕ ಇಲಾಖೆ, ಬೆಂಗಳೂರು.

16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
17. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು (ನಗರ), ಎಸ್.ಕರಿಯಪ್ಪ ರಸ್ತೆ, ಬನಶಂಕರಿ, ಬೆಂಗಳೂರು-70.
18. ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಂಗಳೂರು.
19. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೆಂಗಳೂರು (ನಗರ).
20. ಮಾಹಿತಿ ಕೇಂದ್ರಕ್ಕೆ(10 ಪ್ರತಿಗಳು)
21. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.